# ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂಃ ನ್ಯಾಯಾಲಯಃ ನರಸಿಂಹರಾಜಪುರ

**ಸಿಸಿಃನಂಃ 641/2024**

**ಸಿ.ಡಬ್ಲ್ಯೂಃ 7**
**ಪಿ.ಡಬ್ಲೂಃ 4**

**ಸಾಕ್ಷಿದಾರರ ಹೆಸರು ಃ ಬಾಲಾಜಿ**
**ತಂದೆಯ ಹೆಸರು ಃ ಬಾಲು**
**ವಯಸ್ಸು ಃ 26 ವರ್ಷ**
**ಉದ್ಯೋಗ ಃ ಮಂಗಳವಾದ್ಯ ನುಡಿಸುವ ಕೆಲಸ**
**ವಾಸಸ್ಥಳ ಃ ಭದ್ರಾವತಿ.**

**ದಿನಾಂಕಃ 06.01.2026 ರಂದು ಪ್ರಮಾಣವಚನ ಬೋಧಿಸಲಾಯಿತು.**

## ಃಃ ಮುಖ್ಯ ವಿಚಾರಣೆಃ ಮಾನ್ಯಃ ಎಪಿಪಿಯವರಿಂದಃ

ನನಗೆ ಈ ಪ್ರಕರಣದಲ್ಲಿ ಯಾವುದೇ ವಿಚಾರ ತಿಳಿದಿರುವುದಿಲ್ಲ. ನನಗೆ ಪೊಲೀಸರು ಒಂದು ದಾಖಲೆಗೆ ಸಹಿ ಮಾಡುವಂತೆ ಹೇಳಿದ್ದರಿಂದ ನಾನು ಒಂದು ದಾಖಲೆಗೆ ಸಹಿ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಏನು ವಿಚಾರ ಬರೆದಿದೆ ಎಂದು ನನಗೆ ತಿಳಿದಿರುವುದಿಲ್ಲ.

ಈಗ ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-12 ಎಂದು, ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು ಗುರುತಿಸಲಾಯಿತು. ಸದರಿ ದಾಖಲೆಯಲ್ಲಿ ಏನು ಬರೆದಿದೆ ಎಂದು ತನಗೆ ತಿಳಿದಿರುವುದಿಲ್ಲ ಎಂದು ನುಡಿಯುತ್ತಾರೆ. ಈಗ ಸಾಕ್ಷಿಗೆ ಚಾಸಾ-10 ರವರ ಮನೆಯಲ್ಲಿ ತೆಗೆದುಕೊಂಡ ಭಾವಚಿತ್ರದ ಬಗ್ಗೆ ಕೇಳಲಾಗಿ ಸದರಿ ಭಾವಚಿತ್ರದಲ್ಲಿ ತನ್ನನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-13 ಎಂದು ಗುರುತಿಸಲಾಯಿತು. ಅದೇ ಸಮಯದಲ್ಲಿ ಪೊಲೀಸರು ಚಾಸಾ-10 ರವರಿಂದ ರೂ. 18,000/- ನಗದನ್ನು ವಶಕ್ಕೆ ಪಡೆದುಕೊಂಡಿರುತ್ತಾರೆಂದರೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತುಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿ ಯವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ ಅಂತೆಯೇ ಪರಿಗಣಿಸಿ ಅನುಮತಿ ನೀಡಲಾಯಿತು)

**ಃಃಪಾಟೀ ಸವಾಲುಃ ಮಾನ್ಯ ಎಪಿಪಿಯವರಿಂದಃಃ**

ದಿನಾಂಕಃ 07.08.2024 ರಂದು ಭದ್ರಾವತಿ ಟೌನ್ ಪೇಪರ್ ನಲ್ಲಿರುವ ಚಾಸಾ-10 ರವರಿಗೆ ಸೇರಿದ ನಿವೇಶನ ಸಂಃ 5/34 ವಾಸದ ಮನೆಯಲ್ಲಿ ಪ್ರಕರಣದ ಆರೋಪಿತರು ತಾವು ಕಳವು ಮಾಡಿದ ವಸ್ತುಗಳನ್ನು ಚಾಸಾ-10 ರವರ ಬಳಿ ವಶಪಡಿಸಿಕೊಳ್ಳಲು ಹೋದಾಗ ಸದರಿ ಚಾಸಾ-10 ರವರು ನಮ್ಮಗಳ ಸಮಕ್ಷಮ ಸದರಿ ಕಳುವಾದ ವಸ್ತುಗಳನ್ನು ಈಗಾಗಲೇ ಗುಜರಿ ಅಂಗಡಿಗೆ ಮಾರಾಟ ಮಾಡಿದ್ದು ಅವುಗಳಿಂದ ಬಂದ ರೂ.18,000/-ಗಳನ್ನು ಹಾಜರುಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಆಗ ಸ್ಥಳದಲ್ಲಿಯೇ ಮಧ್ಯಾಹ್ನ 1.00 ರಿಂದ 1.30 ಗಂಟೆಯವರೆಗೆ ಪೊಲೀಸರು ಬರೆದುಕೊಂಡ ಮಹಜರಿಗೆ ನಾನು ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ಸದರಿ ಸಂದರ್ಭದಲ್ಲಿ ರೂ. 18,000/-ಗಳನ್ನು ಪೊಲೀಸರು ಚಾಸಾ-10 ರವರಿಂದ ಅಮಾನತುಪಡಿಸಿಕೊಂಡರು ಎಂದರೆ ಸರಿಯಲ್ಲ. ಆ ಸಂದರ್ಭದಲ್ಲಿ ಪೊಲೀಸರು ಒಂದು ಭಾವಚಿತ್ರವನ್ನು ತೆಗೆದುಕೊಂಡರು ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಃಃಪಾಟೀ ಸವಾಲು ಆರೋಪಿತರ ಪರ ಶ್ರೀ. ಎಂ ಸಿ ವಕೀಲರಿಂದಃಃಇಲ್ಲಾಃಃ**

**ಃಃ ಮರು ವಿಚಾರಣೆ ಇಲ್ಲಃಃ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇ ಎ ಒ**

**ಪ್ರ.ದ.ನ್ಯಾದಂಃ ನ.ರಾ.ಪುರ.**

**ಸಾಕ್ಷಿ ಸಹಿಃ**